NOVEMBER 09, 2025

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಇಂದು, ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ. ಸರ್ವೋಚ್ಚ ನ್ಯಾಯಾಲಯ, 1995 ರಲ್ಲಿ, ಕಾನೂನು ಸೇವೆಗಳ ದಿನಾಚರಣೆಗೆ, ಚಾಲನೆ ನೀಡಿತು. ಜನ ಸಾಮಾನ್ಯರ ನಿತ್ಯದ ಅವಶ್ಯಕತೆಗಳಿಗೆ ಅನುಗುಣವಾಗಿ, ಕಾನೂನು ನೆರವು ನೀಡಲಾಗುತ್ತಿದೆ. ಲೋಕ ಅದಾಲತ್ ಮತ್ತು ಮಧ್ಯಸ್ಥಗಾರ ಕೇಂದ್ರದ ಮೂಲಕ, ನ್ಯಾಯದಾನ ಪ್ರಕ್ರಿಯೆಯ ವೇಗ ವರ್ಧಿಸಲಾಗಿದೆ, ಎಂದು, ದಾವಣಗೆರೆ ಜಿಲ್ಲೆ, ಹಿರಿಯ ಸಿವಿಲ್ ನ್ಯಾಯಾಧೀಶ, ಮಹಾವೀರ ಕರೆಣ್ಣವರ ತಿಳಿಸಿದ್ದಾರೆ. ಕಲಬುರಗಿ ಖಾಯಂ ಜನತಾ ನ್ಯಾಯಾಲಯ, ಈ ತಿಂಗಳ 15 ರಿಂದ, ಯಾದಗಿರಿಯಲ್ಲಿಯೂ, ವಿಚಾರಣೆ ನಡೆಸಲಿದೆ ಎಂದು, ಜಿಲ್ಲಾ ನ್ಯಾಯಾಧೀಶ ಎಚ್.ಜೆ. ಮರುಳಸಿದ್ಧಾರಾಧ್ಯ ತಿಳಿಸಿದ್ದಾರೆ. ತಿಂಗಳಲ್ಲಿ ಎರಡು, ಮೂರು ಬಾರಿ, ವಿಚಾರಣೆ ನಡೆಸಿ, ಸ್ಥಳೀಯ ವ್ಯಾಜ್ಯಗಳನ್ನು ಇತ್ಯರ್ಥ ಪಡಿಸಲಾಗುವುದು, ಎಂದರು.

<><><>

ಗ್ರಾಹಕರ ಆಯೋಗಗಳಲ್ಲಿ ಇ–ಫೈಲಿಂಗ್, ವಿಡಿಯೊ ಕಾನ್ಫರೆನ್ಸ್ ಗೆ ಅವಕಾಶ ಕಲ್ಪಿಸಲಾಗಿದೆ. ಫೊರೆನ್ಸಿಕ್ ಸಾಕ್ಷ್ಯ ಪರಿಗಣಿಸಲಾಗುತ್ತಿದೆ. ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಕ್ರಮ ವಹಿಸಲಾಗುತ್ತಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು. ಧಾರವಾಡ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ, ನೂತನ ಕಟ್ಟಡ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು. ಜಿಲ್ಲಾ ಆಯೋಗದಲ್ಲಿ 2025, ಅಕ್ಟೋಬರ್ 31 ರ ವರೆಗೆ ದಾಖಲಾಗಿದ್ದ, 12 ಸಾವಿರದ 779 ಪ್ರಕರಣಗಳಲ್ಲಿ, 12 ಸಾವಿರದ 67 ಪ್ರಕರಣಗಳು ಇತ್ಯಾರ್ಥವಾಗಿವೆ ಎಂದರು.

<><><>

ಕರ್ನಾಟಕ ರಾಜ್ಯ ಪ್ರವಾಸ ಕೈಗೊಂಡಿರುವ, ಉಪ ರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಅವರು, ಇಂದು ಬೆಳಗ್ಗೆ ಬೆಂಗಳೂರು ಯಲಹಂಕ ವಾಯುಪಡೆ ನಿಲ್ದಾಣಕ್ಕೆ ತಲುಪಿದರು. ಅವರನ್ನು ರಾಜ್ಯಪಾಲರಾದ ಥಾವರ ಚಂದ್ ಗೆಹ್ಲೋಟ್ ಹೂಗುಚ್ಛ ನೀಡಿ ಆತ್ಮೀಯವಾಗಿ ಬರಮಾಡಿಕೊಂಡರು. ಕೇಂದ್ರ ಬೃಹತ್ ಕೈಗಾರಿಕೆಗಳ ಖಾತೆ ಸಚಿವರಾದ ಹೆಚ್.ಡಿ ಕುಮಾರಸ್ವಾಮಿ, ರಾಜ್ಯ ನಗರಾಭಿವೃದ್ಧಿ ಖಾತೆ ಸಚಿವರಾದ ಬೈರತಿ ಸುರೇಶ್ ಸ್ವಾಗತಿಸಿದರು.

<><><>

ಬೆಂಗಳೂರಿನಲ್ಲಿ ಜರುಗಿದ ಶ್ರೀ ಕನಕ ಜಯಂತಿ ಕಾರ್ಯಕ್ರಮದಲ್ಲಿ, ಕನಕ ಶ್ರೀ ಪ್ರಶಸ್ತಿಯನ್ನು ಚಂದ್ರಕಾಂತ ಬಿಜ್ಜರಗಿ, ಕನಕ ಗೌರವ ಪ್ರಶಸ್ತಿಯನ್ನು ಡಾಕ್ಟರ ಅಕ್ಕಮಹಾದೇವಿ ಹಾಗೂ ಕನಕ ಯುವ ಪುರಸ್ಕಾರವನ್ನು ಡಾಕ್ಟರ ರವೀಂದ್ರ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರದಾನಿಸಿದರು. ಕಾಗಿನೆಲ್ಲಿ ಗುರುಪೀಠದ ಸಿದ್ದರಾಮಾನಂದ ಸ್ವಾಮೀಜಿ, ಸಚಿವ ಶಿವರಾಜ

ತಂಗಡಗಿ, ಕನಕದಾಸ ಅಧ್ಯಯನ ಕೇಂದ್ರದ ಅಧ್ಯಕ್ಷ ಕಾ.ತ ಚಿಕ್ಕಣ್ಣ, ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷ ಚನ್ನಪ್ಪಕಟ್ಟಿ ಇದ್ದರು.

<><><>

ಕನ್ನಡ ಸಾಹಿತ್ಯದಲ್ಲಿ ದಾಸ ಸಾಹಿತ್ಯ ಹಾಗೂ ವಚನ ಸಾಹಿತ್ಯ ಅಪೂರ್ವವಾದ ಸಂಪತ್ತಾಗಿವೆ. ಕನಕದಾಸರ ತತ್ವ ಸಂದೇಶಗಳನ್ನು ಜನ ಸಮುದಾಯಕ್ಕೆ ತಲುಪಿಸುವ ಅವಶ್ಯಕತೆ ಇದೆ ಎಂದು ಕೊಪ್ಪಳ ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊಫೆಸರ್ ಬಿ.ಕೆ ರವಿ ಅಭಿಪ್ರಾಯಪಟ್ಟರು. ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ಜರುಗಿದ, ಶ್ರೀ ಕನಕದಾಸರ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ದಾಸಶ್ರೇಷ್ಠ ಶ್ರೀ ಕನಕದಾಸರು ತಮ್ಮ ಕೀರ್ತನೆಗಳ ಮೂಲಕ, ಸಮಾಜಕ್ಕೆ ಮಾರ್ಗದರ್ಶಿ ಸಂದೇಶ ನೀಡಿ, ಸಾಮಾಜಿಕ ಬದಲಾವಣೆಗೆ ಶ್ರಮಿಸಿದ ಮಹನೀಯರು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿಯಲ್ಲಿ ಜರುಗಿದ, ಕನಕ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಧ್ವನಿ: ಸಚಿವ ಕೆ.ಎಚ್.ಮುನಿಯಪ್ಪ 33 ಸೆಕೆಂದುಗಳು

<><><>

ಮತಗಳ್ಳತನದ ವಿರುದ್ಧ, ರಾಜ್ಯದಲ್ಲಿ ಸಹಿ ಸಂಗ್ರಹ ಅಭಿಯಾನ ಕೈಗೊಂಡಿದ್ದು, 1 ಕೋಟಿ 12 ಲಕ್ಷದ 41 ಸಾವಿರ ಸಹಿ ಪಡೆಯಲಾಗಿದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ತಿಳಿಸಿದ್ದಾರೆ. ಬೆಂಗಳೂರಿನ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ, ಅವರು ಸುದ್ದಿಗೋಷ್ಠಿ ನಡೆಸಿದರು. ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ, ವಿದ್ಯುನ್ಮಾನ ಮತಯಂತ್ರ – ಇ.ವಿ.ಎಂ. ಬದಲು, ಮತಪತ್ರ ಬಳಸಲು, ಚಿಂತನೆ ನಡೆದಿದೆ ಎಂದರು.

<><><>

ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿಯಮಿತದ, ಆಡಳಿತ ಮಂಡಳಿ ನಿರ್ದೇಶಕರ ಸ್ಥಾನಕ್ಕೆ, ಸಾರ್ವತ್ರಿಕ ಚುನಾವಣೆಯ ಮತದಾನವು, ಇಂದು ಬೆಳಗ್ಗೆ ಆರಂಭಗೊಂಡಿದ್ದು, ಪ್ರಗತಿಯಲ್ಲಿದೆ. ಬ್ಯಾಂಕ್ ಆವರಣದಲ್ಲಿ ಆಯೋಜಿತ ಮತದಾನ ಪ್ರಕ್ರಿಯೆಯು, ಸಂಜೆ 4 ಗಂಟೆ ವರೆಗೆ ಜರುಗಲಿದೆ.

<><><>

ರಾಜ್ಯದಲ್ಲಿ 46 ಸಾವಿರ ಸರ್ಕಾರಿ ಶಾಲೆಗಳು, 75 ಸಾವಿರ ಅನುದಾನಿತ ಶಾಲೆಗಳು ಕಾರ್ಯ ನಿರ್ವಹಿಸುತ್ತಿವೆ. ಸರ್ಕಾರಿ ಶಾಲೆಗಳಲ್ಲಿ ಖಾಲಿಯಿರುವ 12 ಸಾವಿರ ಹಾಗೂ ಅನುದಾನಿತ ಶಾಲೆಗಳಲ್ಲಿ ಖಾಲಿಯಿರುವ 6 ಸಾವಿರ ಶಿಕ್ಷಕ ಹುದ್ದೆಗಳು ಸೇರಿದಂತೆ ಒಟ್ಟು 18 ಸಾವಿರ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಖಾತೆ ಸಚಿವ ಮಧು ಬಂಗಾರಪ್ಪ ಹೇಳಿದರು. ಕೊಡಗು ಜಿಲ್ಲೆ, ಸೋಮವಾರಪೇಟೆ ಸಮೀಪದ, ಬೇಳೂರು ಕುಸುಬೂರು ಗ್ರಾಮದ, ಸರ್ಕಾರಿ ಪ್ರಾಥಮಿಕ ಶಾಲೆಯ, ಶತಮಾನೋತ್ಸವದ ಸಮಾರೋಪ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ತಲಾ ಒಂದರಂತೆ, ಒಟ್ಟು 900 ಕೆ.ಪಿ.ಎಸ್ ಶಾಲೆಗಳಿಗೆ ಸರ್ಕಾರ ಮಂಜೂರಾತಿ ನೀಡಿದೆ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>